ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) :—

ಅ)	1) ಕರ್ನಾಟಕ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ	ರೂ.	1418.00 ಲಕ್ಷ
	2) ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ	ರೂ.	900.00 ಲಕ್ಷ
ಆ)	1) ಕರ್ನಾಟಕ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ	ರೂ.	26.83 ಲಕ್ಷ
	2) ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ	ರೂ.	3.72 ಲಕ್ಷ
ಇ)	1) ಕರ್ನಾಟಕ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ	122	
	2) ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ	14	

ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಗಣಕೀಕರಣ

2689 (3542) ಶ್ರೀ ಸಭಾಪತಿ ಯು.ಆರ್. (ಉಡುಪಿ) :— ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಆಡಳಿತದಲ್ಲಿ ಮಾಹಿತಿ ತಂತ್ರಜ್ಞಾನ ಅಳವಡಿಕೆಯು ಸರ್ಕಾರದ ನೀತಿಯಾಗಿದ್ದು ಗಣಿ ಮತ್ತು ಭೂವಿಜ್ಞಾನ ಇಲಾಖೆಯನ್ನು ಗಣಕೀಕರಣಗೊಳಿಸಲಾಗಿದೆಯೇ; ಇಲ್ಲವಾದಲ್ಲಿ ವಿಳಂಬಕ್ಕೆ ಕಾರಣಗಳೇನು;

ಆ) ಗಣಕೀಕರಣಗೊಂಡ ಮಂತ್ರಿಗಳ ಮತ್ತು ಕಾರ್ಯದರ್ಶಿಗಳ ಕಛೇರಿ ಹಾಗೂ ಜಿಲ್ಲಾ ಇಲಾಖಾ ಕೇಂದ್ರಗಳಿಗೆ ಅಳವಡಿಸಿದ ಸಾಫ್ಟ್‌ವೇರ್ ವಿವರ ಹಾಗೂ ಈಮೈಲ್ ವಿಳಾಸವನ್ನು ಒದಗಿಸುವುದು.

ಶ್ರೀ ವಿ. ಮುನಿಯಪ್ಪ (ಗಣಿ ಮತ್ತು ಭೂವಿಜ್ಞಾನ ಸಚಿವರು) :—

ಗಣಿ ಮತ್ತು ಭೂವಿಜ್ಞಾನ ಇಲಾಖೆಯಲ್ಲಿ ಗಣಕೀಕರಣ ಕಾರ್ಯವನ್ನು ಕಳೆದ 5-6 ವರ್ಷಗಳಿಂದ ಹಂತ ಹಂತವಾಗಿ ಕೈಗೊಳ್ಳಲಾಗುತ್ತಿದೆ.

ಆ) ಇಲಾಖೆಯ ಜಿಲ್ಲಾ ಅಂತರ್ಜಲ ಕಛೇರಿಗಳಲ್ಲಿ ಹಾಗೂ ನಾಲ್ಕು ರಸಾಯನ ಪ್ರಯೋಗ ಶಾಲೆಗಳಲ್ಲಿ ವಿಂಡೋಸ್-98 ಮತ್ತು ಆಫೀಸ್-97 ಗಳಲ್ಲದೆ ವಿಶ್ವ ಬ್ಯಾಂಕ್

ನೆರವಿನ ಜಲಶಾಸ್ತ್ರ ಯೋಜನೆಯಡಿಯಲ್ಲಿ ಜಿ.ಡಬ್ಲ್ಯೂ.ಡಿ.ಇ.ಎಸ್. ಸಾಫ್ಟ್‌ವೇರ್‌ಗಳನ್ನು ಅಳವಡಿಸಲಾಗಿದೆ. ಕೇಂದ್ರ ಕಛೇರಿಯ ಈ-ಮೈಲ್ ವಿಳಾಸವು ಈ ಕೆಳಕಂಡಂತಿದೆ.

ಶಿವಮೊಗ್ಗ	geosmg@satyam.net.in
ತುಮಕೂರು	geotmk@bsnl.net.in
ದಕ್ಷಿಣ ಕನ್ನಡ	geomng@bsnl.net.in
ಬೆಂಗಳೂರು	nhari@blr.vsnl.net.in

ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಕಛೇರಿಗಳೊಂದಿಗೆ ಮಂತ್ರಿಗಳ ಮತ್ತು ಕಾರ್ಯದರ್ಶಿಗಳ ಕಛೇರಿಗಳು ಲೋಕಲ್ ಏರಿಯಾ ನೆಟ್‌ವರ್ಕ್ ಮೂಲಕ ಸಂಪರ್ಕ ಹೊಂದಿರುವುದಿಲ್ಲ.

ಸಣ್ಣ ಕೈಗಾರಿಕಾ ಮಂತ್ರಿಗಳು ಮತ್ತು ಇಲಾಖಾ ಕಾರ್ಯದರ್ಶಿಗಳ ಕಛೇರಿ ಗಣಕೀಕರಣ

2690 (3543) ಶ್ರೀ ಸಭಾಪತಿ ಯು.ಆರ್. (ಉಡುಪಿ) :— ಮಾನ್ಯ ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಆಡಳಿತದಲ್ಲಿ ಮಾಹಿತಿ ತಂತ್ರಜ್ಞಾನ ಅಳವಡಿಕೆ ಸರ್ಕಾರದ ನೀತಿಯಾಗಿದ್ದು; ಸಣ್ಣ ಕೈಗಾರಿಕಾ ಇಲಾಖಾ ಮಂತ್ರಿಗಳ ಮತ್ತು ಇಲಾಖಾ ಕಾರ್ಯದರ್ಶಿಗಳ ಕಛೇರಿಗಳನ್ನು ಗಣಕೀಕರಣಗೊಳಿಸಲಾಗಿದೆಯೇ; ಇಲ್ಲವಾದಲ್ಲಿ ಕಾರಣಗಳೇನು;

ಆ) ಈ ಬಗ್ಗೆ ಸರಕಾರ ತೆಗೆದುಕೊಂಡ ಮತ್ತು ತೆಗೆದುಕೊಳ್ಳುವ ಕ್ರಮಗಳ ವಿವರಗಳೊಂದಿಗೆ ಮಂತ್ರಿಗಳ ಹಾಗೂ ಇಲಾಖಾ ಕಾರ್ಯದರ್ಶಿಗಳ ಈಮೆಲ್ ವಿಳಾಸವನ್ನು ಒದಗಿಸುವುದು

ಶ್ರೀ ಎಸ್.ಆರ್. ಕಾಶಪ್ಪನವರ್ (ಸಣ್ಣ ಕೈಗಾರಿಕಾ ಸಚಿವರು) :—

ಸಣ್ಣ ಕೈಗಾರಿಕಾ ಮಂತ್ರಿಗಳ ಕಛೇರಿಯನ್ನು ಗಣಕೀಕರಣಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಇಲಾಖಾ ಕಾರ್ಯದರ್ಶಿಗಳಿಗೆ ಈಗಾಗಲೇ ಈ ಮೇಲೆ ಸೌಲಭ್ಯವನ್ನು ಕಲ್ಪಿಸಿಕೊಡಲಾಗಿದೆ.

ಸಣ್ಣ ಕೈಗಾರಿಕಾ ಸಚಿವರ ಕಚೇರಿಯನ್ನು ಇನ್ನೂ ಗಣಕೀಕೃತಗೊಳಿಸಿರುವುದಿಲ್ಲ-ವಾದ್ದರಿಂದ ಇನ್ನೂ ಈಮೈಲ್ ಸೌಲಭ್ಯ ಒದಗಿಸಿರುವುದಿಲ್ಲ. ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಕಾರ್ಯದರ್ಶಿಗಳ ಇ-ಮೈಲ್ ವಿಳಾಸ.

``secyin@secretariat2.kar.nic.in"